ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೊಂದನೆಯ ಅಧಿವೇಶನ

ಮಂಗಳವಾರ, ದಿನಾಂಕ: 22ನೇ ಸೆಪ್ಟಂಬರ್, 2020

ಮೈಸೂರು ಮಹಾನಗರ ಪಾಲಿಕೆ ಪೌರಕಾರ್ಮಿಕರ ಬಗ್ಗೆ

ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :-

186 (240) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಮೈಸೂರು ಮಹಾನಗರ ಪಾಲಿಕೆಯಲ್ಲಿ ಖಾಯಂ ಹಾಗೂ ಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ಪೌರಕಾರ್ಮಿಕರ ಸಂಖ್ಯೆ ಎಷ್ಟು ; (ಪ್ರತ್ಯೇಕವಾಗಿ ವಿವರ ನೀಡುವುದು)

(ಆ) ಪ್ರತಿದಿನ ಸದರಿ ಪೌರಕಾರ್ಮಿಕರು ನಿರ್ವಹಿಸುವ ಕಾರ್ಯಗಳಾವುವು;

(ಇ) ಪ್ರತಿದಿನ ಎಷ್ಟು ಸಮಯ ಕಾರ್ಯನಿರ್ವಹಿಸುತ್ತಾರೆ ; ಇವರಿಗೆ ನೀಡಲಾಗುತ್ತಿರುವ ಮಾಸಿಕ ವೇತನ ಮೊತ್ತವೆಷ್ಟು ; ಹಾಗೂ ಚೆಕ್ ಮೂಲಕ ವೇತನ ಪಾವತಿಸಲಾಗುತ್ತಿದೆಯೇ ; (ಪ್ರತ್ಯೇಕವಾಗಿ ವಿವರ ನೀಡುವುದು)

(ಈ) ಸದರಿಯವರಿಗೆ ನೀಡಲಾಗುತ್ತಿರುವ ವಿಶೇಷ ಸವಲತ್ತುಗಳೇನು; (ವಿವರ ನೀಡುವುದು)

(ಉ) ಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವವರನ್ನು ಖಾಯಂಗೊಳಿಸಲು ನಿಯಮ ರೂಪಿಸಲಾಗಿದೆಯೇ ?